ಗಳಲ್ಲಿ ಫಲಾನುಭವಿಯು 2 ಎಕರೆಯಿಂದ ಗರಿಷ್ಟ 7 5 ಎಕರೆವರೆಗೆ ಖುಷ್ಕಿ ಜಮೀನು ಹೊಂದಿರಬಹುದಾಗಿರುತ್ತದೆ

ಆ) ಕನಿಷ್ಟ 2 ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಒತ್ತಟ್ಟಿಗೆ ಕನಿಷ್ಟ 8 ಎಕರೆಯಿಂದ ಗರಿಷ್ಟ 15 ಎಕರೆವರೆಗೆ ಖುಷ್ಕಿ ಜಮೀನು ಹೊಂದಿರುವ ಫಲಾಪೇಕ್ಷಿಗಳಿಗೆ ಗಂಗಾ ಕಲ್ಯಾಣ ಸಾಮೂಹಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ ನೀರಾವರಿ ಸೌಲಭ್ಯವನ್ನು ಕಲ್ಪಿಸಲು ಯೋಜನೆಯನ್ನು ರೂಪಿಸಲಾಗಿದೆ

ಇ) ಈ ಬಗ್ಗೆ ನಿಗಮವು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಒತ್ತಟ್ಟಿಗೆ ಜಮೀನು ಹೊಂದಿರುವ ಫಲಾಪೇಕ್ಷಿಗಳಿಗೆ ಗಂಗಾ ಕಲ್ಯಾಣ ಸಾಮೂಹಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ ನೀರಾವರಿ ಸೌಲಭ್ಯವನ್ನು ಒದಗಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ

590 (967) ಶ್ರೀ ಹಾಲಪ್ಪ ಹೆಚ್. (ಹೊಸನಗರ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾಲಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಪಶು ಚಿಕಿತ್ಸಾಲಯಗಳನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮವೇನು?

ಇ) ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಈ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು?(ವಿವರ ನೀಡುವುದು)

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಹೌದು ಬಂದಿದೆ, ಹೊಸನಗರ ವಿಧಾನ ಸಭಾ ಕ್ಷೇತ್ರದಲ್ಲಿ 1 ಪಶು ಚಿಕಿತ್ಸಾಲಯ ಕೊರತೆ ಸರ್ಕಾರದ ಗಮನಕ್ಕೆ ಬಂದಿದೆ

ಆ) ಡಾ ಡಿ ಎಂ ನಂಜುಂಡಪ್ಪ ರವರ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ವರದಿಯಂತೆ ಹೊಸನಗರ ಮುಂದುವರಿದ ತಾಲ್ಲೂಕು

ಆಗಿರುತ್ತದೆ ಇಲ್ಲಿ 1,07,925 ಜಾನುವಾರು ಘಟಕಗಳಿವೆ ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5000 ಜಾನುವಾರು ಘಟಕಕ್ಕೆ ಒಂದು ಪಶು ಚಿಕಿತ್ಸಾಲಯಂತೆ ಹೊಸನಗರ ತಾಲ್ಲೂಕಿನಲ್ಲಿ 22 ಪಶುವೈದ್ಯ ಸಂಸ್ಥೆಗಳು ಇರಬೇಕಿತ್ತು ಆದರೆ 21 ಸಂಸ್ಥೆಗಳಿವೆ ಇನ್ನು ಒಂದು ಕೊರತೆ ಇದ್ದು ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ

ಇ) ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮತ್ತು ಪ್ರಾಥಮಿಕ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮತ್ತು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮತ್ತು ಕೃತಕ ಗರ್ಭಧಾರಣ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇಲಾಖೆಯಲ್ಲಿದೆ ಇದಕ್ಕೆ ಯಾವ ಕಾಲಮಿತಿ ನಿಗದಿಯಾಗಿಲ್ಲ

ಈ) ಈ ಕಾರ್ಯಕ್ರಮ ಹಂತಹಂತವಾಗಿ ಮಾಡಬೇಕಾಗುತ್ತದೆ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆಗಳು, ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ/ಕೃತಕ ಗರ್ಭಧಾರಣಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಬಂದಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ

591 (968) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು, (ಹುದ್ದೆವಾರು ವಿವರ ನೀಡುವುದು)?

ಇ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಹೊಸನಗರ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ 8 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು 4 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 4 ವೈದ್ಯಾಧಿಕಾರಿ ಹುದ್ದೆ ಖಾಲಿ ಇವೆ ಹುದ್ದೆವಾರು ವಿವರ ಈ ಕೆಳಕಂಡಂತಿದೆ